# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ

**ಸೇಡಂ**

ಸಿ.ಸಿ. ನಂಃ 996/2023 ಸಿಡಬ್ಲೂ ಃ 14 ಪಿಡಬ್ಲೂಃ 4

ಪ್ರಮಾಣವಚನ ಬೋಧಿಸಲಾಯಿತು ದಿಃ 29-11-2024

ಹೆಸರು ಹಣಮಂತ

ತಂದೆ ಹೆಸರು ಃ ಶೇಖರ ಲೋಹಾರ

ವಯಸ್ಸು ಃ 40 ವರ್ಷ

ಉದ್ಯೋಗ ಃ ಎ.ಎಸ್.ಐ ಮಳಖೇಡ ಪೊಲೀಸ ಠಾಣೆ

ವಾಸಸ್ಥಳ ಃ ಮಳಖೇಡ

**ಃ ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನಾನು ಸನ್ 2020 ರಿಂದ ಇಲ್ಲಿಯವರೆಗೂ ಮಳಖೇಡ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ. ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ 24.06.2023 ರಂದು 11-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 47-2023 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಈಗಾಗಲೇ ಅದನ್ನು ನಿಪಿ-1 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1 (ಬಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4 (ಎ) ಎಂದು ಗುರುತಿಸಲಾಯಿತು.

ದಿನಾಂಕ 24.06.2023ರಂದು ಚಾಸಾ-2 ಮತ್ತು 3 ರವರ ಸಮಕ್ಷಮ ಶವಪಂಚನಾಮೆಯನ್ನು ಮಧ್ಯಾಹ್ನ 02.00ರಿಂದ 03.00ಗಂಟೆಯವರೆಗೆ ಜರುಗಿಸಿರುತ್ತೇನೆ. ಸಾಕ್ಷಿಯ ಶವ ತನಿಖಾ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ-5(ಎ) ಮತ್ತು (ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ಪಂಚನಾಮೆ ಅವಧಿಯಲ್ಲಿ ತೆಗೆದಿರುವ ಪೊಟೋವನ್ನು ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಗಿದ್ದು, ಸದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಂತರ ಸದರಿ ಪ್ರಕರಣ ಗಂಭಿರ ಪ್ರಕರಣ ಆಗಿರುವುದರಿಂದ ಸದರಿ ಪರಕರಣವನ್ನು ಚಾಸಾ-15ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ ಶ್ರೀ ಎಸ್. ಆರ್. ಪಿ.** ಆರೋಪಿ ಪರ ವಕೀಲರಿಂದ ಃ

ದಿಃ 24.06.2023 ರಂದು 11-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 47-2023 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿನಾಂಕ 24.06.2023ರಂದು ಚಾಸಾ-2 ಮತ್ತು 3 ರವರ ಸಮಕ್ಷಮ ಶವಪಂಚನಾಮೆಯನ್ನು ಮಧ್ಯಾಹ್ನ 02.00ರಿಂದ 03.00ಗಂಟೆಯವರೆಗೆ ಜರುಗಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಸದರಿ ಪ್ರಕರಣ ಗಂಭಿರ ಪ್ರಕರಣ ಆಗಿರುವುದರಿಂದ ಸದರಿ ಪರಕರಣವನ್ನು ಚಾಸಾ-15ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ.ದ.ನ್ಯಾ.ದಂ.ಗಳು, ಸೇಡಂ**

Case called out.
Accused present.
CW14 present examined as PW4 and got marked. Ex.P.4 and 5, 4(a), 5(2).
CW2 and 3 given up by the Ld.APP. CW8 and 9 present and B/o.
Reissue W/s to CW10 and 15.
Call on 10.01.25.

JMFC., Sedam.